ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 31-03-2021 ಪ್ರಶ್ನೆ ಸಂಖ್ಯೆ : 2999 (2481)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 31-03-2021

ಉತ್ತರಿಸುವ ಸಚಿವರು: ಸಮಾಜ ಕಲ್ಯಾಣ ಸಚಿವರು

ವಿಷಯ : ಉದ್ಯೋಗ ವಿನಿಮಯ ಕೇಂದ್ರವನ್ನು ಪುನರ್ ಸ್ಥಾಪಿಸುವ ಬಗ್ಗೆ

(ಅ) ಈ ಹಿಂದೆ ಪರಿಶಿಷ್ಟ ಜಾತಿ/ಪಂಗಡದವರಿಗಾಗಿ ಸಮಾಜ ಕಲ್ಯಾಣ ಇಲಾಖೆಯ ನಿರ್ದೇಶನಾಲಯದಲ್ಲೇ ಇದ್ದ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೋಂದಾಯಿಸಿದ್ದವರ ಸಂಖ್ಯೆ ಎಷ್ಟು ; (ಅವರುಗಳ ಹೆಸರು, ವಿಳಾಸ ನೀಡುವುದು)

(ಆ) ಆ ಪೈಕಿ ಉದ್ಯೋಗ ಪಡೆದ ಅಭ್ಯರ್ಥಿಗಳ ವಿವರಗಳೇನು ;

(ಇ) ಯಾವ ಕಾರಣಕ್ಕಾಗಿ ಆ ಕೋಶವನ್ನು ಮುಚ್ಚಲಾಯಿತು ;

(ಈ) ಈ ಉದ್ಯೋಗ ವಿನಿಮಯ ಕೇಂದ್ರವನ್ನು ಪುನಃ ಪ್ರಾರಂಭಿಸಿ ಪರಿಶಿಷ್ಟ ಜಾತಿ/ಪಂಗಡದವರಿಗೆ ಅನುಕೂಲ ಕಲ್ಪಿಸಲು ಸರ್ಕಾರ ಮುಂದಾಗುವುದೇ ?